**All India Radio: Bangalore**
**National Bulletin In Kannada**
**09.05.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.05.2026  1.10 p.m.**

**<><><><>**

ಮುಖ್ಯಾಂಶಗಳು

1. ಪಶ್ಚಿಮ ಬಂಗಾಳದ ನೂತನ ಮುಖ್ಯಮಂತ್ರಿಯಾಗಿ ಸುವೇಂದು ಅಧಿಕಾರಿ ಪ್ರಮಾಣವಚನ ಸ್ವೀಕಾರ; ಸಮಾರಂಭದಲ್ಲಿ ಪ್ರಧಾನಿ, ಕೇಂದ್ರ ಸಚಿವರು ಭಾಗಿ
2. ಮುಂದಿನ ರಕ್ಷಣಾ ಸಿಬ್ಬಂದಿ ಮುಖ್ಯಸ್ಥರಾಗಿ ಲೆಫ್ಟಿನೆಂಟ್ ಜನರಲ್ ಎನ್.ಎಸ್. ರಾಜಸುಬ್ರಮಣಿ ನೇಮಕ
3. ನವದೆಹಲಿಯಲ್ಲಿ ಎರಡು ದಿನಗಳ ಹಿಂದೂ ಮಹಾಸಾಗರ ಸಂವಾದ ಕಾರ್ಯಕ್ರಮ ಸಂಪನ್ನ
4. ಐಪಿಎಲ್ ಟಿ-೨೦ ಕ್ರಿಕೆಟ್:  ಜೈಪುರದಲ್ಲಿಂದು ರಾಜಸ್ತಾನ್ ರಾಯಲ್ಸ್ - ಗುಜರಾತ್ ಟೈಟನ್ಸ್ ಮುಖಾಮುಖಿ.

<><><><>

ಪಶ್ಚಿಮ ಬಂಗಾಳದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಸುವೇಂದು ಅಧಿಕಾರಿ ಇಂದು ಪ್ರಮಾಣವಚನ ಸ್ವೀಕರಿಸಿದ್ದಾರೆ. ಕೋಲ್ಕತ್ತಾದ ಬ್ರಿಗೇಡ್ ಪರೇಡ್ ಮೈದಾನದಲ್ಲಿ ನಡೆದ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಸೇರಿದಂತೆ ಕೇಂದ್ರ ಸಚಿವರು ಹಾಗೂ ಎನ್‌ಡಿಎ ಆಡಳಿತವಿರುವ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳು ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದರು. ಇದೇ ಸಂದರ್ಭದಲ್ಲಿ ದಿಲೀಪ್ ಘೋಷ್, ಅಗ್ನಿಮಿತ್ರ ಪೌಲ್, ಅಶೋಕ್ ಕೀರ್ತಾನಿಯಾ, ನಿಸಿತ್ ಪ್ರಮಾಣಿಕ್ ಮತ್ತು ಕ್ಷುಧಿರಾಮ್ ಟುಡು ಸೇರಿದಂತೆ  ಐದು ಸಂಪುಟ ಸಚಿವರು ಪ್ರಮಾಣವಚನ ಸ್ವೀಕರಿಸಿದರು. ರಾಜ್ಯಪಾಲ ಆರ್.ಎನ್. ರವಿ ಅವರು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು. ಸಮಾರಂಭಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ, ಬ್ರಿಗೇಡ್ ಮೈದಾನದ ವರೆಗೆ ರೋಡ್ ಶೋ ನಡೆಸಿದರು.

<><><><>

ಲೆಫ್ಟಿನೆಂಟ್ ಜನರಲ್ ಎನ್.ಎಸ್. ರಾಜಸುಬ್ರಮಣಿ ಅವರನ್ನು ದೇಶದ ಮುಂದಿನ ರಕ್ಷಣಾ ಸಿಬ್ಬಂದಿ ಮುಖ್ಯಸ್ಥರನ್ನಾಗಿ ಕೇಂದ್ರ ಸರ್ಕಾರ ಇಂದು ನೇಮಕ ಮಾಡಿದೆ. ಪ್ರಸ್ತುತ ಸಿಡಿಎಸ್ ಆಗಿರುವ ಜನರಲ್ ಅನಿಲ್ ಚೌಹಾನ್ ಅವರ ಅಧಿಕಾರಾವಧಿ ಈ ತಿಂಗಳ ೩೦ರಂದು ಮುಕ್ತಾಯಗೊಳ್ಳಲಿದ್ದು, ನಂತರ ಸುಬ್ರಮಣಿ ಅವರು, ಅಧಿಕಾರ ಸ್ವೀಕರಿಸಲಿದ್ದಾರೆ. ಇದರ ಜೊತೆಗೆ ಅವರು, ಮಿಲಿಟರಿ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿಯಾಗಿಯೂ ಜವಾಬ್ದಾರಿ ನಿರ್ವಹಿಸಲಿದ್ದಾರೆ. ಇದೇ ವೇಳೆ, ಕೇಂದ್ರ ಸರ್ಕಾರ ವೈಸ್ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್ ಅವರನ್ನು ಮುಂದಿನ ನೌಕಾಪಡೆಯ ಮುಖ್ಯಸ್ಥರನ್ನಾಗಿ ನೇಮಿಸಿದೆ. ವೈಸ್ ಅಡ್ಮಿರಲ್ ಸ್ವಾಮಿನಾಥನ್ ಪ್ರಸ್ತುತ ಪಶ್ಚಿಮ ನೌಕಾ ಕಮಾಂಡ್‌ನ ಫ್ಲ್ಯಾಗ್ ಆಫೀಸರ್ ಕಮಾಂಡಿಂಗ್-ಇನ್-ಚೀಫ್ ಆಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಭಾರತೀಯ ನೌಕಾಪಡೆಯ ಕಾರ್ಯಾಚರಣೆ, ಕಾರ್ಯತಂತ್ರ ಮತ್ತು ಸಿಬ್ಬಂದಿ ನಿರ್ವಹಣೆಯೊಂದಿಗೆ ಅಡ್ಮಿರಲ್ ಸ್ವಾಮಿನಾಥನ್, ಸುಮಾರು ನಾಲ್ಕು ದಶಕಗಳ ವಿಶಿಷ್ಟ ಸೇವಾ ಅನುಭವ ಹೊಂದಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ನಾಳೆ ಕರ್ನಾಟಕ ಮತ್ತು ಹೈದರಾಬಾದ್ ಪ್ರವಾಸ ಕೈಗೊಳ್ಳಲಿದ್ದು, ಮೊದಲಿಗೆ ಅವರು, ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಕೇಂದ್ರಕ್ಕೆ ಆಗಮಿಸಿ, ಅದರ ೪೫ನೇ ವಾರ್ಷಿಕೋತ್ಸವ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಮಧ್ಯಾಹ್ನ ಅವರು, ಹೈದರಾಬಾದ್‌ಗೆ ಪ್ರಯಾಣ ಬೆಳಸಲಿದ್ದು, ಅಲ್ಲಿ ಸುಮಾರು ೯ ಸಾವಿರದ ೪೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದು, ಕೆಲವು ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

<><><>

ಪರಿವರ್ತನಾತ್ಮಕ ಜಗತ್ತಿನಲ್ಲಿ ಹಿಂದೂ ಮಹಾಸಾಗರ ಪ್ರದೇಶ ಎಂಬ ವಿಷಯದ ಮೇಲೆ ನವದೆಹಲಿಯಲ್ಲಿ ಆಯೋಜಿಸಲಾಗಿದ್ದ ಎರಡು ದಿನಗಳ ಹಿಂದೂ ಮಹಾಸಾಗರ ಸಂವಾದ - ಐಒಡಿ ೧೦ ನಿನ್ನೆ ಯಶಸ್ವಿಯಾಗಿ ಸಂಪನ್ನಗೊಂಡಿದೆ. ಈ ಸಂವಾದ ಹಿಂದೂ ಮಹಾಸಾಗರ ಪ್ರದೇಶದ ಪ್ರಮುಖ ಬೆಳವಣಿಗೆಗಳು ಮತ್ತು ಉದಯೋನ್ಮುಖ ಸವಾಲುಗಳ ಕುರಿತು ಚರ್ಚಿಸಲು ಹಿಂದೂ ಮಹಾಸಾಗರ ಪ್ರದೇಶ ಒಕ್ಕೂಟದ ಸದಸ್ಯ ರಾಷ್ಟ್ರಗಳ ಹಿರಿಯ ಅಧಿಕಾರಿಗಳು, ನೀತಿ ನಿರೂಪಕರು

ಮತ್ತು ತಜ್ಞರನ್ನು ಒಂದೇ ವೇದಿಕೆಯಡಿ ಸೇರಿಸಿತ್ತು ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<><><>

ರವೀಂದ್ರನಾಥ ಬಂಗಾಳ ಕವಿ ಹಾಗೂ ರಾಷ್ಟ್ರಗೀತೆಯ ಕರ್ತೃ ಟ್ಯಾಗೋರ್ ಅವರ ೧೬೫ನೇ ಜನ್ಮ ದಿನಾಚರಣೆ ಅಂಗವಾಗಿ ಇಂದು ಪೋಚಿಶೆ ಬೋಯಿಶಾಖ್ ದಿನದಂದು ರವೀಂದ್ರನಾಥ ಠಾಕೂರ್ ಅವರ ಜಯಂತಿಯನ್ನು ಆಚರಿಸಲಾಗುತ್ತಿದೆ. ಶಾಂತಿನಿಕೇತನ, ವಿಶ್ವಭಾರತಿ ವಿಶ್ವವಿದ್ಯಾಲಯ ಮತ್ತು ಪಶ್ಚಿಮ ಬಂಗಾಳ ಹಾಗೂ ಬಾಂಗ್ಲಾದೇಶದಾದ್ಯಂತ ಪ್ರಮುಖ ಆಚರಣೆಗಳೊಂದಿಗೆ ಜಾಗತಿಕವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತವೆ, ಇವುಗಳಲ್ಲಿ ರವೀಂದ್ರ ಸಂಗೀತ, ಕಾವ್ಯ, ನೃತ್ಯ ಮತ್ತು ನಾಟಕ ಸೇರಿವೆ. ಪೋಚಿಶೆ ಬೋಯಿಶಾಖ್ ಸಂದರ್ಭದಲ್ಲಿ ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ರವೀಂದ್ರನಾಥ ಟ್ಯಾಗೋರ್ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಉಪರಾಷ್ಟ್ರಪತಿಗಳು, ಪ್ರವರ್ತಕ ಚಿಂತಕ, ಕಲಾವಿದ ಮತ್ತು ಶಿಕ್ಷಣತಜ್ಞರಾಗಿದ್ದ ಟಾಗೋರ್ ಅವರ ಕೊಡುಗೆಗಳು ಸಾಹಿತ್ಯ ಕ್ಷೇತ್ರವನ್ನು ಮೀರಿ ವಿಸ್ತರಿಸಿದೆ ಎಂದು ತಿಳಿಸಿದ್ದಾರೆ. ರವೀಂದ್ರನಾಥ ಠಾಗೂರ್ ಅವರು, ಅಸಾಧಾರಣ ಬರಹಗಾರ, ಚಿಂತಕ ಮತ್ತು ಕವಿ ಎಂದು ಬಣ್ಣಿಸಿರುವ ಪ್ರಧಾನಿ ನರೇಂದ್ರ ಮೋದಿ, ಅಸಾಮಾನ್ಯ ತತ್ವಜ್ಞಾನಿ, ಶಿಕ್ಷಣತಜ್ಞ, ಕಲಾವಿದ ಹಾಗೂ ಭಾರತದ ನಾಗರಿಕ ಆತ್ಮದ ಕಾಲಾತೀತ ಧ್ವನಿಯಾಗಿ ಅವರು, ಛಾಪು ಮೂಡಿಸಿದ್ದಾರೆ ಎಂದಿದ್ದಾರೆ.

<><><>

ದೇಶಾದ್ಯಂತ ನಾಗರಿಕರಿಗೆ ಸಾಮಾಜಿಕ ಭದ್ರತಾ ರಕ್ಷಣೆಯನ್ನು ಒದಗಿಸುತ್ತಿರುವ ಪ್ರಮುಖ ಯೋಜನೆಗಳಾದ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ, ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ ಮತ್ತು ಅಟಲ್ ಪಿಂಚಣಿ ಯೋಜನೆ ೧೧ ವರ್ಷಗಳನ್ನು ಪೂರೈಸಿವೆ. ಈ ಯೋಜನೆಗಳು ಎಲ್ಲರಿಗೂ, ವಿಶೇಷವಾಗಿ ಸಮಾಜದ ಹಿಂದುಳಿದ ಮತ್ತು ದುರ್ಬಲ ವರ್ಗಗಳಿಗೆ ಕೈಗೆಟುಕುವ ಆರ್ಥಿಕ ರಕ್ಷಣೆಯನ್ನು ವಿಸ್ತರಿಸಲು ಕಲ್ಪಿಸಲಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ. ಈ ಪ್ರಮುಖ ಯೋಜನೆಗಳು ನಾಗರಿಕರನ್ನು ಜೀವನವನ್ನು ರಕ್ಷಿಸುವ ಮತ್ತು ದೀರ್ಘಕಾಲೀನ ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ಬೆಳೆಸುವ ಮೂಲಕ ವಿಮೆ ಮತ್ತು ಪಿಂಚಣಿ ವಿಸ್ತರಿಸುವ ಗುರಿ ಹೊಂದಿವೆ. ಯೋಜನೆಗಳ ಕುರಿತು ಮಾತನಾಡಿದ ಕೇಂದ್ರ ಹಣಕಾಸು ಸಚಿವೆ

ನಿರ್ಮಲಾ ಸೀತಾರಾಮನ್, ಕಡಿಮೆ ವೆಚ್ಚದ ವಿಮೆ ಮತ್ತು ಪಿಂಚಣಿ ಪ್ರಯೋಜನಗಳನ್ನು ಒದಗಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಜನ ಸುರಕ್ಷಾ ಯೋಜನೆಗಳನ್ನು ಪ್ರಾರಂಭಿಸಿದ್ದಾರೆ ಎಂದು ಹೇಳಿದರು. ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆಯಡಿ ೨೭ ಕೋಟಿಗೂ ಹೆಚ್ಚು ದಾಖಲಾತಿಗಳು, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಯಲ್ಲಿ ೫೮ ಕೋಟಿ ಮತ್ತು ಅಟಲ್ ಪಿಂಚಣಿ ಯೋಜನೆಯಡಿಯಲ್ಲಿ ೯ ಕೋಟಿ ದಾಖಲಾತಿಗಳನ್ನು ಮಾಡಲಾಗಿದೆ. ಪಿಎಂ ಜೀವನ ಜ್ಯೋತಿ ಬೀಮಾ ಯೋಜನೆಯಡಿಯಲ್ಲಿ ೧೦.೭ ಲಕ್ಷಕ್ಕೂ ಹೆಚ್ಚು ಕುಟುಂಬಗಳಿಗೆ ೨೧ ಸಾವಿರದ ೫೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಹಕ್ಕುಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.  ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಯು ೧.೮೪ ಲಕ್ಷಕ್ಕೂ ಹೆಚ್ಚು ಕುಟುಂಬಗಳಿಗೆ ಸುಮಾರು ಮೂರು ಸಾವಿರದ ೬೬೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಹಕ್ಕುಗಳನ್ನು ಇತ್ಯರ್ಥಪಡಿಸಿದೆ ಎಂದು ಕೇಂದ್ರ ಹಣಕಾಸು ಸಚಿವರು ಹೇಳಿದರು. ಇದೇ ಸಂದರ್ಭದಲ್ಲಿ, ಹಣಕಾಸು ರಾಜ್ಯ ಸಚಿವ ಪಂಕಜ್ ಚೌಧರಿ, ಬಡವರಿಗೆ ವಿಮಾ ರಕ್ಷಣೆ ಮತ್ತು ಪಿಂಚಣಿ ಬೆಂಬಲವನ್ನು ಒದಗಿಸುವುದು ಈ ಯೋಜನೆಗಳ ಉದ್ದೇಶವಾಗಿದ್ದು, ಡಿಜಿಟಲೀಕರಣ, ದಾಖಲಾತಿ ಮತ್ತು ಹಕ್ಕುಗಳ ಸರಳೀಕರಣದ ಮೇಲೆ ಈ ಯೋಜನೆಗಳು ಗಮನ ಕೇಂದ್ರೀಕರಿಸಿದೆ ಎಂದು ಹೇಳಿದರು.

<><><><>

ಮೂರು ಕೆರಿಬಿಯನ್ ರಾಷ್ಟ್ರಗಳ ಪ್ರವಾಸದ ಮೂರನೇ ಚರಣದ ಭಾಗವಾಗಿ ಟ್ರಿನಿಡಾಡ್ ಮತ್ತು ಟೊಬ್ಯಾಗೊಗೆ ತೆರಳಿರುವ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಇಂದು, ಅಲ್ಲಿನ ವಿದೇಶಾಂಗ ಮತ್ತು ಕ್ಯಾರಿಕಾಮ್ ವ್ಯವಹಾರಗಳ ಸಚಿವಾಲಯದಲ್ಲಿ ನಡೆದ ಧ್ವಜಾರೋಹಣ ಸಮಾರಂಭದಲ್ಲಿ ಪಾಲ್ಗೊಂಡರು.  ಈ ವೇಳೆ ಅವರು ಉಭಯ ರಾಷ್ಟ್ರಗಳ ನಡುವಿನ ಸಾಂಪ್ರದಾಯಿಕ ಬಾಂಧವ್ಯವನ್ನು ಶ್ಲಾಘಿಸಿ, ಆಳವಾದ ಸಾಂಸ್ಕೃತಿಕ ಸಂಬಂಧ ಮತ್ತು ಐತಿಹಾಸಿಕ ಒಡನಾಟವನ್ನು ಸ್ಮರಿಸಿದರು.  ಇದೇ ವೇಳೆ, ಉಭಯ ದೇಶಗಳ ಉಡುಗೆ-ತೊಡುಗೆ, ಕ್ರೀಡೆ ಮತ್ತು ಸಂಪ್ರದಾಯಗಳಲ್ಲಿನ ಸಾಮತ್ಯೆಯನ್ನು ಅವರು ವಿಶೇಷವಾಗಿ ಉಲ್ಲೇಖಿಸಿದರು. ತಮ್ಮ ಭೇಟಿಯ ಸಂದರ್ಭದಲ್ಲಿ ಸಚಿವ ಎಸ್. ಜೈಶಂಕರ್, ಟ್ರಿನಿಡಾಡ್ ಮತ್ತು ಟೊಬ್ಯಾಗೊ ಪ್ರಧಾನಿ, ಕಮ್ಲಾ ಪ್ರಸಾದ್ ಬಿಸೇಸರ್ ಅವರನ್ನು ಭೇಟಿಮಾಡಿ, ದ್ವಿಪಕ್ಷೀಯ ಸಹಕಾರವನ್ನು

ಬಲಪಡಿಸುವ ಕುರಿತು ಚರ್ಚಿಸಿದರು. ಈ ವೇಳೆ ಪ್ರವಾಸೋದ್ಯಮ ಸೌರಶಕ್ತಿ ಯೋಜನೆ, ತ್ವರಿತ ಪರಿಣಾಮ ಯೋಜನೆಗಳು ಮತ್ತು ಆಯುರ್ವೇದ ಪೀಠದ ಸ್ಥಾಪನೆ ಸೇರಿದಂತೆ ಹಲವು ಒಪ್ಪಂದಗಳಿಗೆ ಸಹಿ ಹಾಕಲಾಗಿದೆ ಎಂದು ಸಚಿವರು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ನೀಡಿದ್ದಾರೆ.

<><><>

ಮಹಾರಾಣಾ ಪ್ರತಾಪ್ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಗೌರವ ನಮನ ಸಲ್ಲಿಸಿದ್ದಾರೆ. ಪ್ರಧಾನಿ ಮೋದಿ ಅವರು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ "ರಾಷ್ಟ್ರದ ಮಹಾನ್ ಯೋಧ ಮತ್ತು ಶೌರ್ಯ ಪರಾಕ್ರಮದ ಅಮರ ಸಂಕೇತ - ಮಹಾರಾಣಾ ಪ್ರತಾಪ್ - ಅವರ ಜನ್ಮ ವಾರ್ಷಿಕೋತ್ಸವದಂದು ಗೌರವಯುತ ನಮನಗಳು. ಅವರು ಇಡೀ ಜೀವನವನ್ನು ತಮ್ಮ ಮಾತೃಭೂಮಿಯ ಗೌರವ, ಘನತೆ ಮತ್ತು ವೈಭವವನ್ನು ಕಾಪಾಡಲು ಮುಡಿಪಾಗಿಟ್ಟರು ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಮಹಾರಾಣಾ ಪ್ರತಾಪ್ ಅವರು ಮಾತೃಭೂಮಿಯ ರಕ್ಷಣೆಗಾಗಿ ತಮ್ಮ ಇಡೀ ಜೀವನ ಮುಡಿಪಾಗಿಟ್ಟ ಅದಮ್ಯ ಶೌರ್ಯ ಮತ್ತು ಅಚಲ ಹೆಮ್ಮೆಯ ಸಂಕೇತವಾಗಿದ್ದಾರೆ ಎಂದು ಹೇಳಿದ್ದಾರೆ.

<><><>

ಹಾರ್ಮುಜ್ ಜಲಸಂಧಿಯ ಬಳಿ ನಿನ್ನೆ ಮರದ ದೋಣಿಯೊಂದು ಆಕಸ್ಮಿಕ ಬೆಂಕಿಗೆ ಸಿಲುಕಿ ಮಗುಚಿ ಬಿದ್ದ ಪರಿಣಾಮ ಒಬ್ಬ ಭಾರತೀಯ ಮೃತಪಟ್ಟು, ನಾಲ್ವರಿಗೆ ಸುಟ್ಟ ಗಾಯಗಳಾಗಿವೆ. ದೋಣಿಯಲ್ಲಿ ಸಂಭವಿಸಿದ ಬೆಂಕಿಯ ಕಾರಣವನ್ನು ಸದ್ಯಕ್ಕೆ ಪತ್ತೆಹಚ್ಚಲಾಗುತ್ತಿದೆ. ಬೆಂಕಿ ಹೊತ್ತಿಕೊಂಡ ಸಮಯದಲ್ಲಿ ಆ ಮಾರ್ಗವಾಗಿ ಸಾಗುತ್ತಿದ್ದ ಮತ್ತೊಂದು ಹಡಗು ತಕ್ಷಣವೇ ಸ್ಪಂದಿಸಿ, ದೋಣಿಯಲ್ಲಿದ್ದ ಸಿಬ್ಬಂದಿಯನ್ನು ರಕ್ಷಿಸಿದೆ. ಗಾಯಗೊಂಡವರಿಗೆ ಪ್ರಸ್ತುತ ದುಬೈನಲ್ಲಿ ವೈದ್ಯಕೀಯ ಚಿಕಿತ್ಸೆ ನೀಡುತ್ತಿದ್ದು, ಅವರು ಸುರಕ್ಷಿತವಾಗಿದ್ದಾರೆ ಎಂದು ವರದಿಯಾಗಿದೆ. ದುಬೈನಲ್ಲಿರುವ ಭಾರತೀಯ ರಾಯಭಾರ ಕಚೇರಿ ಅಧಿಕಾರಿಗಳು, ಈಗಾಗಲೇ ರಕ್ಷಿಸಲ್ಪಟ್ಟ ಭಾರತೀಯರನ್ನು ಭೇಟಿ ಮಾಡಿ, ಮಾತುಕತೆ ನಡೆಸಿದ್ದಾರೆ.

<><><>

ಜೈಪುರದ ಸವಾಯ್ ಮಾನ್‌ಸಿಂಗ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ೮ ವಿಕೆಟ್‌ಗಳ ಜಯ ದಾಖಲಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>